**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 734/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ.06**

**ದಿನಾಂಕಃ** 23.10.2025 **ಸಿಡಬ್ಲ್ಯೂ.02**

| | |
|---|---|
| ಹೆಸರು | ಉಮೇಶ |
| ತಂದೆ ಹೆಸರು | ನಾಗರಾಜಪ್ಪ |
| ವಯಸ್ಸು | 35 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಗಂಗನರಸೀಪುರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.3 ರವರ ಪರಿಚಯ ಇದೆ. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ಕಚ್ಚಾನಕಾಶೆ ಆಗಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ.3(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಇನ್ನೊಂದು ದಾಖಲೆ ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇದೆ ಎಂದು ಗುರುತಿಸಿರುತ್ತಾರೆ, ಸದರಿ ದಾಖಲೆ ಶವತನಿಖಾ ವರದಿ ಆಗಿದ್ದು ಅದನ್ನು ನಿಪಿ.15 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ.15(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಛಾಯಾಚಿತ್ರಗಳನ್ನು ತೋರಿಸಲಾಗಿ ಅವುಗಳಲ್ಲಿ ತಾವು ಇರುವುದಾಗಿ ಗುರುತಿಸಿರುತ್ತಾರೆ, ಸಾಕ್ಷಿ ಗುರುತಿಸಿದ ಛಾಯಾಚಿತ್ರಗಳನ್ನು ಈಗಾಗಲೇ ನಿಪಿ.4 ಮತ್ತು 5 ಎಂದು ಗುರುತಿಸಲಾಗಿದ್ದು, ಸಾಕ್ಷಿಯು ಗುರುತಿಸಿದ ಇನ್ನೊಂದು ಛಾಯಾಚಿತ್ರವನ್ನು ನಿಪಿ.16 ಎಂದು ಗುರುತಿಸಲಾಯಿತು. ನಿಪಿ.4 ಮತ್ತು 5 ನ್ನು ಅಪಘಾತವಾದ ಸ್ಥಳ ಗುತ್ತೂರು ಕೆಇಬಿ ತಿರುವಿನಲ್ಲಿ ತೆಗೆದಿರುತ್ತಾರೆ. ಅಪಘಾತವಾದ ನಂತರ ಶವ ಪಂಚನಾಮೆಗೆ ಯಾರೂ ಸಹಿ ಹಾಕದ ಕಾರಣ ಮಾನವೀಯತೆ ದೃಷ್ಟಿಯಿಂದ ನಾನು ಸಹಿ ಹಾಕಿರುತ್ತೇನೆ. ಪೋಲೀಸರು ನನ್ನನ್ನು ಚಾಸಾ.1 ಮತ್ತು 3 ರವರನ್ನು ಘಟನಾ ಸ್ಥಳಕ್ಕೆ ಕರೆದುಕೊಂಡು ಹೋಗಿ ಪರಿಶೀಲನೆ ಮಾಡಿ ಪಂಚನಾಮೆ ಮಾಡಿರುತ್ತಾರೆ. ಸದರಿ ಪಂಚನಾಮೆಯನ್ನು ಮಧ್ಯಾಹ್ನ 3 ರಿಂದ 4 ಗಂಟೆವರೆಗೆ ಮಾಡಿರುತ್ತಾರೆ. ಸಾಕ್ಷಿಗೆ ಇನ್ನೊಂದು ದಾಖಲೆ ತೋರಿಸಲಾಗಿ ಅದು ವಾಹನ ಪಂಚನಾಮೆ ಆಗಿದ್ದು ತನ್ನ ಸಹಿ ಇರುವುದಾಗಿ ಗುರುತಿಸಿರುತ್ತಾರೆ. ಸಾಕ್ಷಿ ಗುರುತಿಸಿದ ವಾಹನ ಪಂಚನಾಮೆ ಈಗಾಗಲೇ ನಿಪಿ.6 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ.6(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿ ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ಗೊತ್ತಿರುವುದಿಲ್ಲ. ಸಾಕ್ಷಿಗೆ ಛಾಯಾಚಿತ್ರಗಳನ್ನು ತೋರಿಸಲಾಗಿ ಅವುಗಳಲ್ಲಿ ತಾವು ಇರುವುದಾಗಿ

ಗುರುತಿಸಿರುತ್ತಾರೆ, ಸಾಕ್ಷಿ ಗುರುತಿಸಿದ ಛಾಯಾಚಿತ್ರಗಳನ್ನು ಈಗಾಗಲೇ ನಿಪಿ.7 ರಿಂದ 12 ಎಂದು ಗುರುತಿಸಲಾಗಿದೆ. ಸದರಿ ಛಾಯಾಚಿತ್ರಗಳನ್ನು ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ07.05.2023 ರಂದು ಗುತ್ತೂರು ಕೆಇಬಿ ಕಾಂಪೌಂಡ್ ಪಕ್ಕದಲ್ಲಿ ಹಾದುಹೋಗಿರುವ ಹರಿಹರ – ಹರಪ್ಪನಹಳ್ಳಿ ರಸ್ತೆಯಲ್ಲಿ ಅಪಘಾತವಾದ ವಿಚಾರಕ್ಕೆ ನನ್ನನ್ನು ಮತ್ತು ಚಾಸಾ.3 ರವರನ್ನು ಪಂಚರನ್ನಾಗಿ ಸಹಕರಿಸಿ ಎಂದು ಕೇಳಿಕೊಂಡ ಮೇರೆಗೆ ನಾವು ಒಪ್ಪಿ ಸಹಿ ಮಾಡಿರುತ್ತೇವೆ ಎಂದರೆ ಸರಿ. ಸದರಿ ಸಂದರ್ಭದಲ್ಲಿ ಪೋಲೀಸರು ನಮ್ಮ ಸಮಕ್ಷಮ ಪಂಚನಾಮೆ ಜರುಗಿಸಿ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿ. ಸದರಿ ಪಂಚನಾಮೆಯನ್ನು ಬೆಳಗ್ಗೆ 11 ರಿಂದ 12 ಗಂಟೆವರೆಗೆ ಜರುಗಿಸಿರುತ್ತಾರೆ ಎಂದರೆ ಸರಿ. ಅದೇ ರೀತಿಯಾಗಿ ಅದೇ ದಿನ ಹರಿಹರ ಗ್ರಾಮಾಂತರ ಪೋಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೊಳಗಾದ ವಾಹನ ಕೆಎ–17 ಎಎ–2404 ನೇದರ ಲಾರಿ ಮತ್ತು ಕೆಎ–17 ಇವೈ–4594 ಟಿವಿಎಸ್ ಎಕ್ಸ್ ಎಲ್ ಬೈಕನ್ನು ಹಾಗೂ ಕೆಎ–17 ಇಪಿ–5759 ಟಿವಿಎಸ್ ಎಕ್ಸ್ ಎಲ್ ಬೈಕಗಳನ್ನು ಚಾಸಾ.3 ರವರ ವಾಹನ ಪಂಚನಾಮೆ ಮಾಡಿ ಜಪ್ತು ಪಡಿಸಿಕೊಂಡರು ಎಂದರೆ ಸರಿ. ಸದರಿ ಸಮಯದಲ್ಲಿ ನಿಪಿ.7 ರಿಂದ 12 ಛಾಯಾಚಿತ್ರ ತೆಗೆಸಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎ ವಿ ಎಂ ವಕೀಲರಿಂದಃ**

ಚಾಸಾ.1 ಮತ್ತು 3 ರವರು ನಮ್ಮ ಊರಿನವರು ಎಂದರೆ ಸರಿ. ಸದರಿಯವರ ಪರಿಚಯ ಇದೆ ಎಂದರೆ ಸರಿ. ಅಪಘಾತದ ಸ್ಥಳ ರಾಜ್ಯ ಹೆದ್ದಾರಿ ಎಂದರೆ ನನಗೆ ಗೊತ್ತಿಲ್ಲ. ಸದರಿ ಸ್ಥಳದಲ್ಲಿ ಸಾಕಷ್ಟು ವಾಹನ ಸಂಚಾರ ಇರುತ್ತದೆ ಎಂದರೆ ಸರಿ. ಘಟನಾ ಸ್ಥಳದಲ್ಲಿ ಕೆಇಬಿ ಗ್ರಿಡ್, ಇಟ್ಟಿಗೆ ಭಟ್ಟಿಗಳು ಇವೆ ಎಂದರೆ ಸರಿ. ನಿಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ವೈಯಕ್ತಿಕ ಮಾಹಿತಿ ಇಲ್ಲ ಎಂದರೆ ಸರಿ. ನಿಪಿ.2 ನ್ನು ಜರುಗಿಸಿದ ನಿಖರವಾದ ದಿನಾಂಕ ಹಾಗೂ ಸಮಯ ಹೇಳಲು ಬರುವುದಿಲ್ಲ ಎಂದರೆ ಸರಿ. ಯಾವ ವಾಹನಗಳ ನಡುವೆ ಆಗಿದೆ ಎಂದು ವಾಹನಗಳ ಸಂಖ್ಯೆ ನನಗೆ ಗೊತ್ತಿಲ್ಲ ಎಂದರೆ ಸರಿ. ಪೋಲೀಸರು ನನಗೆ ಯಾವುದೇ ನೋಟೀಸ್ ಜಾರಿ ಮಾಡಿಲ್ಲ ಎಂದರೆ ಸರಿ. ನಿಪಿ.2 ನ್ನು ಬೆರಳಚ್ಚು ಪಡಿಸಿದ ಪೋಲೀಸರ ಹೆಸರು ಪದನಾಮ ನನಗೆ ಹೇಳಲು ಬರುವುದಿಲ್ಲ ಎಂದರೆ ಸರಿ. ನಿಪಿ.2 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಸರ್ಕಾರಿ ಆಸ್ಪತ್ರೆಯಲ್ಲಿ ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನಿಪಿ.3 ಮತ್ತು 6 ಕ್ಕೆ ಎಲ್ಲಿ ಸಹಿ ಮಾಡಿರುತ್ತೇನೆ ಎಂದು ಹೇಳಲು ಬರುವುದಿಲ್ಲ. ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿ. ಚಾಸಾ.1 ರವರಿಗೆ ಅನುಕೂಲವಾಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಹರಿಹರ